157 ಪ್ರ ನಿ-330
41
060226

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) ಇವರು ನಿಯಮ-330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ

**ವಿಷಯ:**

ಕರ್ನಾಟಕ ರಾಜ್ಯದಲ್ಲಿರುವ ಅತೀ ಹಿಂದುಳಿದ ವರ್ಗದ ಎಲ್ಲಾ ಸಮಾಜಗಳಿಗೆ ಸರ್ಕಾರವು ಕಳೆದ 03 ವರ್ಷಗಳಿಂದ ಯಾವ ಯಾವ ಜಿಲ್ಲೆಗಳಿಗೆ ಸಮುದಾಯ ಭವನ, ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಿದೆ. ಮಾಡಿದ್ದಲ್ಲಿ ಎಷ್ಟು ಸಮುದಾಯ ಭವನಗಳನ್ನು ಹಾಗೂ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಿದೆ. ಇದಕ್ಕೆ ನಿಗದಿಪಡಿಸಿದ ಅನುದಾನ ಎಷ್ಟು, ಪೂರ್ಣಗೊಳ್ಳದ ಸಮುದಾಯ ಭವನಗಳಿಗೆ ಸರ್ಕಾರದಿಂದ ಹಣ ಮಂಜೂರು ಮಾಡಲು ಇಲ್ಲಿಯವರೆವಿಗೂ ಮನವಿ ಸಲ್ಲಿಸಿದ್ದರೂ, ಯಾವುದೇ ಅನುದಾನ ಮಂಜೂರು ಮಾಡಿರುವುದಿಲ್ಲ, ಇದರ ಬಗ್ಗೆ ಸರ್ಕಾರ ಗಮನಿಸಿದೆಯೇ, ಇದರ ಸಲುವಾಗಿ ನಿಯಮ-330ರಲ್ಲಿ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:**

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿವಿಧ ಜಾತಿ / ಜನಾಂಗಗಳ ಸಮುದಾಯ ಚಟುವಟಿಕೆಗಳನ್ನು ಹಾಗೂ ವಿದ್ಯಾರ್ಥಿನಿಲಯಗಳನ್ನು ನಡೆಸಲು ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದ ವಿವಿಧ ಹಿಂದುಳಿದ ವರ್ಗಗಳ ಜಾತಿಗಳಿಗೆ ಸೇರಿದ ಸಂಘ / ಸ್ವಯಂ ಸೇವಾ ಸಂಸ್ಥೆ / ಟ್ರಸ್ಟ್‌ಗಳಿಗೆ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 505 ಬಿಎಂಎಸ್ 2024, ದಿನಾಂಕ:27-09-2024 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 505 ಬಿಎಂಎಸ್ 2024, ದಿನಾಂಕ:15-10-2024 ಮತ್ತು 25-02-2025ರ ಮಾರ್ಗಸೂಚಿ ಗಳನ್ವಯ ಅನುದಾನವನ್ನುಮಂಜೂರು ಮಾಡಲಾಗುತ್ತಿದೆ.

ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾದ ಅನುದಾನವನ್ನು, ಸದರಿ ಯೋಜನೆಯಡಿ ಆಯಾ ಆರ್ಥಿಕ ವರ್ಷಗಳಲ್ಲಿ ಒದಗಿಸುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನುಸಾರ ಮಾರ್ಗಸೂಚಿಗಳನ್ವಯ ಕಟ್ಟಡ ಕಾಮಗಾರಿಯ ಪ್ರಗತಿಯ ವಿವಿಧ ಹಂತಗಳಲ್ಲಿ 3 ಕಂತುಗಳಾಗಿ ಅನುದಾನವನ್ನು ಬಿಡುಗಡೆ ಮಾಡುವ ಮೂಲಕ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುವು ಮಾಡಿಕೊಡಲಾಗುತ್ತಿದೆ.

ಸರ್ಕಾರದಿಂದ ಮಂಜೂರಾದ ಅನುದಾನ ಹೊರತುಪಡಿಸಿ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡದ ನಿರ್ಮಾಣಕ್ಕೆ ಸಂಬಂಧಪಟ್ಟ ಸಂಘ-ಸಂಸ್ಥೆಯವರು ಅಂದಾಜು ವೆಚ್ಚದ ಕನಿಷ್ಠ 25 ರಷ್ಟು ಮೊತ್ತವನ್ನು ಅವರ ಸ್ವಂತ ಸಂಪನ್ಮೂಲಗಳಿಂದ ಭರಿಸಬೇಕಾಗಿರುತ್ತದೆ.

ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾದ ಅನುದಾನದ ವಿವರಗಳು ಈ ಕೆಳಗಿನಂತಿವೆ.

| ಕ್ರ. ಸಂ. | ವರ್ಷ | ಮಂಜೂರಾದ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಮಂಜೂರಾದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2022-23 | 463 | 20261.00 |
| 2 | 2023-24 | 139 | 15584.00 |
| 3 | 2024-25 | 296 | 16113.00 |

...2

ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ವಿವಿಧ ಸಂಘ-ಸಂಸ್ಥೆಗಳಿಗೆ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರು ಮಾಡಿರುವ ಅನುದಾನಕ್ಕೆ ಪೂರಕವಾಗಿ ಈಗಾಗಲೇ ಮೊದಲನೇ / ಎರಡನೇ ಕಂತಾಗಿ ಬಿಡುಗಡೆಯಾಗಿರುವ ಅನುದಾನಕ್ಕೆ ಹಣಬಳಕೆ ಪ್ರಮಾಣ ಪತ್ರ ಹಾಗೂ ಕಟ್ಟಡದ ಪ್ರಗತಿ ವರದಿಯನ್ನು ಸಲ್ಲಿಸಿದ್ದಲ್ಲಿ ಜೇಷ್ಠತೆಯ ಆಧಾರದ ಮೇಲೆ, ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆ ಮೇರೆಗೆ ಮುಂದಿನ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಮೂಲಕ ಪೂರ್ಣಗೊಳ್ಳದ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುವು ಮಾಡಿಕೊಡಲಾಗುವುದು.

ಸರ್ಕಾರದಿಂದ ಮಂಜೂರಾಗುವ ಸಹಾಯಧನ ಹೊರತುಪಡಿಸಿ ಅಂದಾಜು ವೆಚ್ಚದ ಬಾಕಿ ಮೊತ್ತವನ್ನು ಸಂಬಂಧಪಟ್ಟ ಸಂಸ್ಥೆಯವರು ಭರಿಸಿಕೊಂಡು ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸುವುದು ಸಂಸ್ಥೆಯವರ ಜವಾಬ್ದಾರಿಯಾಗಿರುತ್ತದೆ. ಅದಾಗ್ಯೂ, ಈ ಕುರಿತು ಜನಪ್ರತಿನಿಧಿಗಳು ಮತ್ತು ಸಂಘ-ಸಂಸ್ಥೆಗಳಿಂದ ಅನುದಾನ ಮಂಜೂರು ಮಾಡುವಂತೆ ಕೋರಿ ಸ್ವೀಕೃತವಾಗುವ ಮನವಿಗಳನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ನಿಯಮಾನುಸಾರ ಅಗತ್ಯ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗುತ್ತಿದೆ. ಈ ಸಂಬಂಧ ಮಾರ್ಗಸೂಚಿಗಳನ್ವಯ ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಯು ಸ್ವೀಕೃತಗೊಂಡಲ್ಲಿ, ಸದರಿ ಯೋಜನೆಯಡಿ ಲಭ್ಯವಿರುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಾಮಗಾರಿಗೆ ಅನುದಾನ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುತ್ತದೆ.

ಕಡತ ಸಂಖ್ಯೆ: ಹಿಂವಕ 1221 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.